RNU AIR DHARWAD

# JULY 3, 2025
# ALL INDIA RADIO- DHARWAD
# PRADESH SAMACHARA (KANNADA) 7:05 AM

**ಮುಖ್ಯಾಂಶಗಳು**

- **ನಂದಿಗಿರಿಧಾಮದಲ್ಲಿ** ನಡೆದ ಸಚಿವ ಸಂಪುಟ ಸಭೆ: ವಿವಿಧ ಜಿಲ್ಲೆಗಳ ಅಭಿವೃದ್ಧಿಗೆ 3400 ಕೋಟಿ ರೂಪಾಯಿ ಅಂದಾಜು ಮೊತ್ತದ ಯೋಜನೆಗಳಿಗೆ ಅನುಮೋದನೆ.

- **ರಾಜ್ಯದ ಎಲ್ಲ ಕಂದಾಯ** ವಿಭಾಗಗಳಲ್ಲಿ ಸಚಿವ ಸಂಪುಟ ಸಭೆ: ಬಜೆಟ್ ಘೋಷಿತ ಯೋಜನೆಗಳ ಜಾರಿಗೆ ಆದ್ಯತೆ– ಮುಖ್ಯಮಂತ್ರಿ

- **ಧಾರವಾಡ ಜಿಲ್ಲೆಯಾದ್ಯಂತ** 146 ಗ್ರಾಮ ಪಂಚಾಯಿತಿಗಳಲ್ಲಿ ಕೂಸಿನ ಮನೆ ತೆರೆಯಲು ಜಿಲ್ಲಾ ಪಂಚಾಯ್ತಿ ಸಿದ್ಧತೆ.

- **ರಾಜ್ಯದ ವಿವಿಧೆಡೆ,** ವಚನ ಸಂರಕ್ಷಣಾ ದಿನವಾಗಿ, ವಚನ ಪಿತಾಮಹ ಡಾ. ಫ.ಗು.ಹಳಕಟ್ಟಿ ಅವರ ಜನ್ಮದಿನ ಆಚರಣೆ

*******

**ಬೆಂಗಳೂರು ವಿಭಾಗ** ವ್ಯಾಪ್ತಿಯ ಜಿಲ್ಲೆಗಳೂ ಸೇರಿದಂತೆ ವಿವಿಧ ಜಿಲ್ಲೆಗಳ ಅಭಿವೃದ್ಧಿಗೆ 3400 ಕೋಟಿ ರೂಪಾಯಿ ಅಂದಾಜು ಮೊತ್ತದ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ನಂದಿಗಿರಿಧಾಮದಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು, ಜಿಲ್ಲೆಗೊಂದರಂತೆ ಕಾರ್ಮಿಕರ ಮಕ್ಕಳ ವಸತಿ ಶಾಲೆಗಳನ್ನು ತೆರೆಯುವುದೂ ಸೇರಿದಂತೆ ವಿವಿಧ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ ಎಂದರು. ಎತ್ತಿನಹೊಳೆ ಯೋಜನೆಯ ಕಾಮಗಾರಿ ಶೇ.90 ರ ಷ್ಟ ಮುಗಿದಿದ್ದು, ಮೊದಲ ಹಂತದಲ್ಲಿ ಕುಡಿಯುವ ನೀರಿನ ಯೋಜನೆಯನ್ನು ಪೂರ್ಣಗೊಳಿಸಿ ಚಿಕ್ಕಬಳ್ಳಾಪುರ ಕೋಲಾರ, ಬೆಂಗಳೂರು ಗ್ರಾಮಾಂತರ ಸೇರಿದಂತೆ 9 ಜಿಲ್ಲೆಗಳ 75 ಲಕ್ಷ ಜನಸಂಖ್ಯೆಗೆ ಕುಡಿಯುವ ನೀರು ಒದಗಿಸಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು.

*******

**ರಾಜ್ಯದ ಎಲ್ಲ ಕಂದಾಯ** ವಿಭಾಗಗಳಲ್ಲಿ ಸಚಿವ ಸಂಪುಟ ಸಭೆ ನಡೆಸುವ ಮೂಲಕ ಬಜೆಟ್‌ನಲ್ಲಿ ಘೋಷಿಸಿರುವ ಯೋಜನೆಗಳ ಜಾರಿಗೆ ಆದ್ಯತೆ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಚಿಕ್ಕಬಳ್ಳಾಪುರದಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ಗುಲ್ಬರ್ಗಾ ಮತ್ತು ಮೈಸೂರು ವಿಭಾಗದಲ್ಲಿ ಸಚಿವ ಸಂಪುಟ ನಡೆಸಲಾಗಿದೆ. ಇಂದು ಬೆಂಗಳೂರು ವಿಭಾಗದಲ್ಲೂ ನಡೆಸಲಾಗಿದೆ. ಮುಂದಿನ ಬಾರಿ ಬೆಳಗಾವಿ ವಿಭಾಗದಲ್ಲಿ ಸಚಿವ ಸಂಪುಟ ಸಭೆ ನಡೆಸಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು.

*******

**ದೃಷ್ಟಿದೋ ' ನಿವಾರಣೆಗೆ** ರಾಜ್ಯ ಸರ್ಕಾರ ಜಾರಿಗೆ ತಂದಿದ್ದ 'ಆಶಾಕಿರಣ' ಯೋಜನೆಯನ್ನು ಮರು ವಿನ್ಯಾಸಗೊಳಿಸಲಾಗಿದೆ ಎಂದು ಆರೋಗ್ಯ ಖಾತೆ ಸಚಿವ ದಿನೇಶ ಗುಂಡೂರಾವ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಮಾಹಿತಿ ನೀಡಿರುವ ಅವರು, ಎಲ್ಲ ಜಿಲ್ಲಾಸ್ಪತ್ರೆಗಳು, ತಾಲೂಕು ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಈಗಾಗಲೇ 393 ಆಶಾಕಿರಣ ದೃಷ್ಟಿ ಕೇಂದ್ರಗಳು ಕಣ್ಣಿನ ಆರೋಗ್ಯ ಸೇವೆ ಒದಗಿಸಲು ಸಜ್ಜಾಗಿ ನಿಂತಿವೆ ಎಂದು ಮಾಹಿತಿ ನೀಡಿದ್ದಾರೆ.

*******

**ಶೈಕ್ಷಣಿಕ ಗುಣಮಟ್ಟ ಸುಧಾರಣೆ** ಉದ್ದೇಶದಿಂದ ಜಿಲ್ಲಾಡಳಿತ ಜಾರಿಗೊಳಿಸಿರುವ ಮಿಷನ್ ವಿದ್ಯಾಕಾಶಿ ಯೋಜನೆ ಯಶಸ್ಸಿಗೆ ಅಗತ್ಯ ಸುಧಾರಣಾ ಕ್ರಮಕೈಗೊಳ್ಳಲಾಗುತ್ತಿದೆ ಎಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದ್ದಾರೆ. ಧಾರವಾಡದಲ್ಲಿ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ ಸಿಇಓ, ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗಳು ಮತ್ತು ಬಿಸಿಯೂಟ ಪೂರೈಸುವ ಸರ್ಕಾರೇತರ ಸಂಸ್ಥೆಗಳೊಂದಿಗೆ ಸಭೆ ನಡೆಸಿದ ಅವರು, ಜಿಲ್ಲೆಯಲ್ಲಿ ಬಿಸಿಯೂಟ ವಿತರಿಸುತ್ತಿರುವ ಸರ್ಕಾರೇತರ ಸಂಸ್ಥೆಗಳೆ ವಿದ್ಯಾರ್ಥಿಗಳಿಗೆ ಮೊಟ್ಟೆ, ಬಾಳೆಹಣ್ಣು ಪೂರೈಸಲು ಕ್ರಮವಹಿಸಬೇಕು. ಇಲ್ಲದಿದ್ದಲ್ಲಿ ಇದಕ್ಕೆ ಪರ್ಯಾಯ ವ್ಯವಸ್ಥೆ ಮಾಡಿ, ಶಿಕ್ಷಕರಿಗೆ ಆಗುತ್ತಿರುವ ಶೈಕ್ಷಣೇತರ ಕಾರ್ಯ, ಒತ್ತಡಗಳನ್ನು ತಪ್ಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಹೇಳಿದರು.

*******

**ಜರ್ಮನಿ ಪ್ರವಾಸದಲ್ಲಿರುವ** ಕೌಶಲ ಅಭಿವೃದ್ಧಿ ಖಾತೆ ಸಚಿವ ಡಾಕ್ಟರ್ ಶರಣ ಪ್ರಕಾಶ ಪಾಟೀಲ ನಾರ್ತ್ ರೈನ್–ವೆಸ್ಟ್ ಫಾಲಿಯಾ ರಾಜ್ಯದ ಡಸೆಲ್ಡಾರ್ಫ್ ನಗರಕ್ಕೆ ನಿನ್ನೆ ಭೇಟಿ ನೀಡಿದರು. ಸ್ಥಳೀಯ ನಿಯೋಗದೊಂದಿಗೆ ಸಮಾಲೋಚನೆ ನಡೆಸಿದ ಅವರು, ಕೌಶಲ ಅಭಿವೃದ್ದಿ ಹಾಗೂ ಕೌಶಲ ವಿನಿಮಯ, ಉದ್ಯೋಗವಾಕಾಶ, ಸ್ಮಾರ್ಟ್ ಉತ್ಪಾದನೆಯಂತಹ ಕ್ಷೇತ್ರಗಳ ಅಪ್ರೆಂಟಿಸ್‌ಶಿಪ್, ಕೌಶಲ ಸಹಯೋಗ, ಯಾಂತ್ರೀಕೃತ ಕೈಗಾರಿಕಾ, ಮೆಕಾಟ್ರಾನಿಕ್ಸ್ ಕುರಿತು ಅಧ್ಯಯನ ನಡೆಸಿ ಮಹತ್ವದ ಒಪ್ಪಂದ ಮಾಡಿಕೊಳ್ಳುವ ಬಗ್ಗೆ ಚರ್ಚೆ ನಡೆಸಿದರು.

*******

**ರಾಜ್ಯದಲ್ಲಿ ಆಡಳಿತ ಯಂತ್ರ** ಸಂಪೂರ್ಣವಾಗಿ ಕುಸಿದಿದ್ದು, ಅಭಿವೃದ್ಧಿ ಕೆಲಸ ಕಾರ್ಯಗಳು ಕುಂಠಿತಗೊಂಡಿವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಮುಖ್ಯಮಂತ್ರಿ ಖುರ್ಚಿಗಾಗಿ ಪೈಪೋಟಿ ನಡೆಯುತ್ತಿದೆ. ಹೀಗಾಗಿ ಅಭಿವೃದ್ಧಿ ಕೆಲಸ ಕಾರ್ಯಗಳನ್ನು ಕಡೆಗಣಿಸಲಾಗಿದೆ. ಆಡಳಿತ ವ್ಯವಸ್ಥೆ ಕುಸಿದುಬಿದ್ದಿರುವ ಹಿನ್ನೆಲೆಯಲ್ಲಿ ಅಧಿಕಾರಿಗಳು ನಿಷ್ಕ್ರಿಯರಾಗಿದ್ದಾರೆ ಎಂದು ಆರೋಪಿಸಿದರು.

*******

**ಪ್ರಕೃತಿ ವಿಕೋಪದಿಂದ ಬೆಳೆ ನ ** ್ಟ ಸಂಭವಿಸಿದರೆ ರೈತರಿಗೆ ಪರಿಹಾರ ನೀಡುವ ಮೂಲಕ ಆರ್ಥಿಕ ಭದ್ರತೆ ಒದಗಿಸುವ ದೃಷ್ಟಿಯಿಂದ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ವಿಮಾ ಯೋಜನೆಯನ್ನು ಪ್ರಸಕ್ತ ಮುಂಗಾರು ಹಂಗಾಮಿಗೆ ವಿಜಯಪುರ ಜಿಲ್ಲೆಯಲ್ಲಿ ಅನು ್ಠಾನಗೊಳಿಸಲಾಗುತ್ತಿದೆ. ರೈತರು ವಿಮೆ ಕಂತು ತುಂಬುವ ಮೂಲಕ ಯೋಜನೆಯ ಲಾಭ ಪಡೆಯುವಂತೆ ವಿಜಯಪುರ ಕೃಷಿ ಇಲಾಖೆಜಂಟಿ ಕೃಷಿ ನಿರ್ದೇಶಕ ಶಿವನಗೌಡ.ಎಸ್. ಪಾಟೀಲ್ ತಿಳಿಸಿದ್ದು, ಈ ಕುರಿತ ಮಾಹಿತಿಯನ್ನು ಆಕಾಶವಾಣಿಯೊಂದಿಗೆ ಹಂಚಿಕೊಂಡಿದ್ದಾರೆ.

*******

**ಧಾರವಾಡ ಜಿಲ್ಲೆಯಾದ್ಯಂತ** 146 ಗ್ರಾಮ ಪಂಚಾಯಿತಿಯಲ್ಲಿ ಕೂಸಿನ ಮನೆ ತೆರೆಯಲು ಜಿಲ್ಲಾ ಪಂಚಾಯ್ತಿ ಸಿದ್ಧತೆ ಮಾಡಿಕೊಂಡಿದೆ. ಜಿಲ್ಲೆಗೆ ರಾಜ್ಯ ಸರ್ಕಾರ 102 ಕೂಸಿನ ಮನೆ ನಿರ್ಮಾಣದ ಗುರಿ ನೀಡಿದ್ದು, ಹೆಚ್ಚುವರಿಯಾಗಿ 44 ಕೂಸಿನ ಮನೆ ನಿರ್ಮಾಣಕ್ಕೆ ಜಿ.ಪಂ ಮುಂದಾಗಿದೆ. ನರೇಗಾ ಕ್ರಿಯಾಶೀಲ ಉದ್ಯೋಗ ಚೀಟಿ ಹೊಂದಿರುವ ಕುಟುಂಬದ ಮೂರು ವ ್ಷದೊಳಗಿನ ಮಕ್ಕಳಿಗೆ ಈ ಕೂಸಿನ ಮನೆ ಆಶ್ರಯ ನೀಡಲಿವೆ. ಜಿಲ್ಲೆಯಲ್ಲಿ 102 ಕೂಸಿನ ಮನೆಗಳಲ್ಲಿ ಒಟ್ಟು 1344 ಮಕ್ಕಳು ನೋಂದಾಯಿಸಿಕೊಂಡಿದ್ದು, ಈ ಪ್ರಮಾಣ ಹೆಚ್ಚಳವಾಗುವ ಸಾಧ್ಯತೆ ಹೆಚ್ಚಾಗಿದೆ. ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೂಸಿನ ಮನೆಗಳಿಗೆ ಹೆಚ್ಚಿನ ಬೇಡಿಕೆಯಿದ್ದು, ಮಹಿಳಾ ಕೂಲಿ ಕಾರ್ಮಿಕರು ಕೂಸಿನ ಮನೆ ಕೇಂದ್ರಕ್ಕೆ ಮಕ್ಕಳನ್ನು ಬಿಟ್ಟು ನರೇಗಾ ಕಾಮಗಾರಿಗಳಲ್ಲಿ ಹೆಚ್ಚು ಭಾಗವಹಿಸುತ್ತಿದ್ದಾರೆ ಎಂದು ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ದೇವಿದಾಸ ಪಾಟೀಲ ಮಾಹಿತಿ ನೀಡಿದ್ದಾರೆ.

*******

**ವಚನ ಪಿತಾಮಹ ಡಾ. ಫ.ಗು.ಹಳಕಟ್ಟಿ** ಅವರ ಜನ್ಮದಿನವನ್ನು ನಿನ್ನೆ ವಚನ ಸಂರಕ್ಷಣಾ ದಿನವನ್ನಾಗಿ ಆಚರಿಸಿ, ವಚನ ಸಾಹಿತ್ಯ ಉಳಿಸಲು ಶ್ರಮಿಸಿದ ಚೇತನಕ್ಕೆ ರಾಜ್ಯದ ವಿವಿಧೆಡೆ ಗೌರವ ಸಲ್ಲಿಸಲಾಯಿತು. ವಚನಗಳ ಹಸ್ತಪ್ರತಿಗಳನ್ನು ಸಂಗ್ರಹಿಸಿ, ಪ್ರಕಟಿಸುವ ಮೂಲಕ ಕರ್ನಾಟಕದ ವಚನ ಸಾಹಿತ್ಯ ಕ್ಷೇತ್ರಕ್ಕೆ ಡಾ.ಫ.ಗು ಹಳಕಟ್ಟಿಯವರು ನೀಡಿದ ಕೊಡುಗೆ ಅನನ್ಯವಾದುದು ಎಂದು  ಉತ್ತರಕನ್ನಡ ಜಿಲ್ಲೆ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ಹೇಳಿದರು. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ  ಆಯೋಜಿಸಿದ್ದ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮದಲ್ಲಿ ಡಾ.ಫ.ಗು ಹಳಕಟ್ಟಿ ಅವರು ಭಾವಚಿತ್ರಕ್ಕೆ ಪು ್ಪ ನಮನ ಸಲ್ಲಿಸಿ ಅವರು ಮಾತನಾಡಿದರು. **ವಚನಗಳನ್ನು ಸಂರಕ್ಷಣೆ** ಮಾಡಿ ಶರಣ ಸಾಹಿತ್ಯವನ್ನುಓದಲು ಅನುವು ಮಾಡಿಕೊಟ್ಟ ಡಾ.ಫ.ಗು. ಹಳ್ಳಕಟ್ಟಿ ಅವರ ಸೇವೆ ಅವಿಸ್ಮರಣೀಯ ಎಂದು ಕಲಬುರಗಿ ಚೇಂಬರ್ ಆಫ್ ಕಾರ್ಮಸ್‌ನ ಅಧ್ಯಕ್ಷ ಶರಣು ಪಪ್ಪಾ ಹೇಳಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿ ್ತ ಸುವರ್ಣ ಸಭಾ ಭವನದಲ್ಲಿಜರುಗಿನ ಡಾ.ಫ.ಗು.ಹಳಕಟ್ಟಿಯವರ 146ನೇ ಜನ್ಮದಿನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. **ಅಳಿವಿನ ಅಂಚಿನಲ್ಲಿದ್ದ ಶರಣರ** ವಚನ ಸಾಹಿತ್ಯವನ್ನು ಸಂಗ್ರಹಿಸಿ, ಸಂರಕ್ಷಿಸಿ, ಮರು ಮುದ್ರಣಗೊಳಿಸಿ ಅವುಗಳಿಗೆ ಮರುಜೀವ ಕೊಟ್ಟವರು ಡಾ.ಫ.ಗು.ಹಳಕಟ್ಟಿ ಅವರು ಎಂದು ಬಾಗಲಕೋಟೆ ಜಿಲ್ಲಾಧಿಕಾರಿ ಸಂಗಪ್ಪ.ಎಂ., ಹೇಳಿದರು. **ರಾಜ್ಯದ ವಿವಿಧ** ಜಿಲ್ಲೆಗಳಲ್ಲೂ ವಚನ ಪಿತಾಮಹ ಡಾ.ಫ.ಗು.ಹಳಕಟ್ಟಿ ಅವರ ಜನ್ಮದಿನವನ್ನು ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ಆಚರಿಸಿದ ವರದಿಗಳು ಬಂದಿವೆ.

*******

**ಈಗ ಸಂಕ್ಷಿಪ್ತ ಸುದ್ದಿಗಳು**

**ಧಾರವಾಡದ ಭಾರತೀಯ** ಮಾಹಿತಿ ತಂತ್ರಜ್ಞಾನ ಸಂಸ್ಥೆ– ಐಐಐಟಿ ಯ 7ನೇ ಘಟಿಕೋತ್ಸವ ಸಮಾರಂಭ ನಾಳೆ ಐಐಐಟಿ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ನಿರ್ದೇಶಕ ಡಾ.ಎಸ್.ಆರ್.ಮಹಾದೇವ ಪ್ರಸನ್ನ ತಿಳಿಸಿದ್ದಾರೆ.

**ನೂತನವಾಗಿ ಪ್ರಾರಂಭಗೊಳ್ಳುತ್ತಿರುವ** ಚಿಕ್ಕಮಗಳೂರು– ಬೆಂಗಳೂರು– ತಿರುಪತಿ ನಡುವಿನ ರೈಲು ಸಂಚಾರಕ್ಕೆ ಇದೇ 11 ರಂದು ಕೇಂದ್ರ ರೈಲ್ವೆ ಹಾಗು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಚಾಲನೆ ನೀಡಲಿದ್ದಾರೆ.

**ಪರಿಶಿ ್ಟ ಜಾತಿ ಮತ್ತು ಪಂಗಡ** ಸಮುದಾಯದ ಮೇಲಿನ ದೌರ್ಜನ್ಯ ನಿಯಂತ್ರಣಕ್ಕೆ ಸೂಕ್ತ ಜಾಗೃತಿ ಮೂಡಿಸಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

*******

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

**ನಂದಿಗಿರಿಧಾಮದಲ್ಲಿ** ನಡೆದ ಸಚಿವ ಸಂಪುಟ ಸಭೆ: ವಿವಿಧ ಜಿಲ್ಲೆಗಳ ಅಭಿವೃದ್ಧಿಗೆ 3400 ಕೋಟಿ ಅಂದಾಜು ಮೊತ್ತದ ಯೋಜನೆಗಳಿಗೆ ಅನುಮೋದನೆ.

**ರಾಜ್ಯದ ಎಲ್ಲ ಕಂದಾಯ** ವಿಭಾಗಗಳಲ್ಲಿ ಸಚಿವ ಸಂಪುಟ ಸಭೆ: ಬಜೆಟ್ ಘೋಷಿತ ಯೋಜನೆಗಳ ಜಾರಿಗೆ ಆದ್ಯತೆ–ಮುಖ್ಯಮಂತ್ರಿ

**ಧಾರವಾಡ ಜಿಲ್ಲೆಯಾದ್ಯಂತ** 146 ಗ್ರಾಮ ಪಂಚಾಯಿತಿಗಳಲ್ಲಿ ಕೂಸಿನ ಮನೆ ತೆರೆಯಲು ಜಿಲ್ಲಾ ಪಂಚಾಯ್ತಿ ಸಿದ್ಧತೆ.

**ರಾಜ್ಯದ ವಿವಿಧೆಡೆ,** ವಚನ ಸಂರಕ್ಷಣಾ ದಿನವಾಗಿ, ವಚನ ಪಿತಾಮಹ ಡಾ. ಫ.ಗು.ಹಳಕಟ್ಟಿ ಅವರ ಜನ್ಮದಿನ ಆಚರಣೆ

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

****END****